**M.V.C.No. 661/2024**
**RW: 1**

**ಸಾಕ್ಷಿಯನ್ನು ದಿಃ *18/03/2026* ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಎದುರುದಾರರ ಪರ ವಕೀಲರಿಂದ.**

ನಾನು ಮುಖ್ಯ ವಿಚಾರಣೆಯಾಗಿ ನನ್ನ ಪ್ರಮಾಣಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿನ ಸಂಗತಿಗಳು ಸತ್ಯವಾಗಿವೆ.

ನಾನು ನ್ಯಾಯಾಲಯಕ್ಕೆ ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸುತ್ತಿದ್ದೇನೆ.

| ಅ.ನಂ. | ದಾಖಲೆಗಳು |
|---|---|
| ನಿ.ಆರ್.1 | ಅಧಿಕಾರ ಪತ್ರ |
| ನಿ.ಆರ್.2 | ವಿಮೆ ಪ್ರತಿ |
| ನಿ.ಆರ್.3 | ಸಿಸಿ 977/2024 ರ ಮೂರು ಪುಟಗಳ ರೋಜನಾಮೆಯ ದೃಢಿಕೃತ ನಕಲು |

ಆದುದರಿಂದ ಪ್ರಮಾಣಪತ್ರ ಮತ್ತು ದಾಖಲೆಗಳನ್ನು ಪರಿಶೀಲಿಸಿ ಅರ್ಜಿಯನ್ನು ವಜಾ ಮಾಡಬೇಕಾಗಿ ವಿನಂತಿ.

***ಪಾಟೀ ಸವಾಲು ಃ ಅರ್ಜಿದಾರರ ಪರ ವಕೀಲರಿಂದ.***

ನಾನು ವಿಮೆ ಕಂಪನಿಯಲ್ಲಿ ಅಪಘಾತದ ವಿಭಾಗದಲ್ಲಿ ಕಳೆದ 20 ವರ್ಷಗಳಿಂದ ದಾಖಲೆಗಳನ್ನು ನೋಡುತ್ತಾ ಬಂದಿರುತ್ತೇನೆ. ಅಪಘಾತದ ಕುರಿತು ನನಗೆ ವೈಯಕ್ತಿಕ ಮಾಹಿತಿ ಇಲ್ಲ ಎಂದರೆ ನಿಜ. ಪೊಲೀಸ ದಾಖಲಾತಿಗಳ ಮೇಲೆ ನಾನು ನುಡಿ ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ನಿಜ. ನಮ್ಮ ವಿಮೆ ವಾಹನದ ಮಾಲೀಕರಿಗೆ ಎಲ್ಲ ದಾಖಲಾತಿಗಳನ್ನು ಒದಗಿಸುವಂತೆ ಕೋರಿ ನೋಟೀಸು ನೀಡಿರುತ್ತೇವೆ. ಸದರಿ ನೋಟೀಸು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ. ಅದಕ್ಕೆ ಮಾಲೀಕರು ಯಾವುದೇ ಉತ್ತರವನ್ನು ನೀಡಿರುವುದಿಲ್ಲ. ಈ ಹೇಳಿಕೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 1 ನೇ ಎದುರುದಾರರ ವಾಹನದ ಚಾಲಕನಿಗೆ ಸೂಕ್ತವಾದ ಚಾಲನಾ ಪರವಾನಿಗೆ ಪತ್ರವಿದ್ದರೂ ಸಹ ಸದರಿ ಮಾಲೀಕರು ಸಲ್ಲಿಸಿರುವ ದಾಖಲಾತಿ ಪರಿಶೀಲನೆ ಮಾಡದೇ ಅಂತಿಮ ವರದಿಯ ಮೇಲೆ ಚಾಲನಾ ಪರವಾನಿಗೆ ಪತ್ರವಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

***ಮರು ವಿಚಾರಣೆ ಃ ಇಲ್ಲ.***

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ,

1 ನೇ ಹೆ ಹಿ ದಿ ನ್ಯಾ ಹಾಗೂ ಸಿಜೆಎಂ,
ಧಾರವಾಡ.